ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ
ದಿನಾಂಕ : DATE: 11-12-2020

# ಸಭಾಪತಿ ವಿರುದ್ಧ ಗೌರ್ನರ್‌ಗೆ ಬಿಜೆಪಿ ದೂರು

## ಅವಿಶ್ವಾಸ ಚರ್ಚಿಸದೆ ಮೇಲ್ಮನೆ ಕಲಾಪ ಮುಂದೂಡಿದ ಪ್ರತಾಪ್‌ಚಂದ್ರ ಶೆಟ್ಟಿ | 15ರವರೆಗೆ ಅಧಿವೇಶನಕ್ಕೆ ಸೂಚಿಸಲು ಕೋರಿಕೆ

## ದೂರು ಹೊತ್ತು ರಾಜಭವನದ ಕದ ತಟ್ಟಿದ ಡಿಸಿಎಂ ಲಕ್ಷ್ಮಣ ಸವದಿ | ಇಂದು ಪರಿಷತ್ ಬಿಜೆಪಿ ಸದಸ್ಯರಿಂದಲೂ ದೂರು ಸಾಧ್ಯತೆ

11/12/20

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಅವಿಶ್ವಾಸ ನಿರ್ಣಯದ ಮೇಲಿನ ಚರ್ಚೆ ಕೈಗೆತ್ತಿಕೊಳ್ಳದೆ ವಿಧಾನಪರಿಷತ್ ಕಾರ್ಯಕಲಾಪವನ್ನು ಏಕಾಏಕಿ ಅನಿರ್ದಿಷ್ಟಾವಧಿಗೆ ಮುಂದೂಡಿರುವ ಸಭಾ ಪತಿ ಪ್ರತಾಪ್‌ಚಂದ್ರ ಶೆಟ್ಟಿ ನಡೆಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿರುವ ಆಡಳಿತಾರೂಢ ಬಿಜೆಪಿ ಇದೀಗ ರಾಜ್ಯಪಾಲರ ಮೊರೆ ಹೋಗಿದೆ.

ಗುರುವಾರ ಸಂಜೆ ಕಲಾಪ ಮುಂದೂಡಿದ ಬೆನ್ನಲ್ಲೇ ಪರಿಷತ್ತಿನ ಸದಸ್ಯರೂ ಆಗಿರುವ ಉಪಮುಖ್ಯಮಂತ್ರಿ ಲಕ್ಷ್ಮಣ ಸವದಿ ಹಾಗೂ ಸರ್ಕಾರದ ಮುಖ್ಯ ಸಚೇತಕ ಮಹಾಂತೇಶ್ ಕವಟಗಿಮಠ ರಾಜಭವನಕ್ಕೆ ತೆರಳಿ ರಾಜ್ಯಪಾಲ ವಜುಭಾಯಿ ವಾಲಾ ಅವರನ್ನು ಭೇಟಿ ಮಾಡಿ ದೂರು ಸಲ್ಲಿಸಿದರು. ಅಲ್ಲದೆ, ಅಧಿವೇಶನದ ಕಲಾಪವನ್ನು ಈ ತಿಂಗಳ 15ರವರೆಗೆ ನಡೆಸುವಂತೆ ಸಭಾಪತಿಗಳಿಗೆ ಸೂಚನೆ ನೀಡಬೇಕು ಎಂದೂ ಕೋರಿದರು.

ಶುಕ್ರವಾರ ಬೆಳಗ್ಗೆ 11 ಗಂಟೆಗೆ ಪರಿಷತ್ತಿನ ಬಿಜೆಪಿಯ ಎಲ್ಲ ಸದಸ್ಯರೂ ರಾಜಭವನಕ್ಕೆ ಹೋಗಿ ಮತ್ತೊಮ್ಮೆ ದೂರು ಸಲ್ಲಿಸಲಿದ್ದಾರೆ ಎಂದು ತಿಳಿದು ಬಂದಿದೆ.

ಸವದಿ ಅವರು ಸಭಾಪತಿಗಳ ನಡೆಯನ್ನು ವಿವರಿಸಿ ಕಲಾಪ ಸಲಹಾ ಸಮಿತಿ ಸಭೆಯಲ್ಲೂ ಅನಿರ್ದಿಷ್ಟಾವಧಿಗೆ ಮುಂದೂಡುವ ಬಗ್ಗೆ ಚರ್ಚೆ ನಡೆಸದೇ ಇರುವುದನ್ನು ರಾಜ್ಯಪಾಲರ ಗಮನಕ್ಕೆ ತಂದರು.

ಇದಕ್ಕೆ ಪ್ರತಿಕ್ರಿಯಿಸದ ರಾಜ್ಯಪಾಲರು ಸರ್ಕಾರದ ಅಡ್ವೋಕೇಟ್ ಜನರಲ್ ಅವರ ಅಭಿಪ್ರಾಯ ಸಂಗ್ರಹಿಸಿ ಮುಂದಿನ ಕ್ರಮ ಕೈಗೊಳ್ಳುವುದಾಗಿ ಸವದಿ ಅವರಿಗೆ ಭರವಸೆ ನೀಡಿದರು. ಬಳಿಕ ದೂರಿನ ಪ್ರತಿಯನ್ನು ರಾಜ್ಯಪಾಲರು ಅಡ್ವೋಕೇಟ್ ಜನರಲ್‌ಗೆ ಕಳುಹಿಸಿದ್ದು, ಈ ಬಗ್ಗೆ ಪರಿಶೀಲನೆ ನಡೆಸುವಂತೆ ಸೂಚಿಸಿದ್ದಾರೆ ಎಂದು ತಿಳಿದು ಬಂದಿದೆ.



## ಕೆಟ್ಟ ಸಂಪ್ರದಾಯ: ಮಾಧುಸ್ವಾಮಿ

**ಈ** ಮಧ್ಯೆ ಗುರುವಾರ ಸಂಜೆ ಸುದ್ದಿಗಾರರೊಂದಿಗೆ ಮಾತನಾಡಿದ ಕಾನೂನು ಸಚಿವ ಮಾಧುಸ್ವಾಮಿ, ವಿಧಾನಸಭೆಯನ್ನು ಗುರುವಾರ ಮುಕ್ತಾಯ ಮಾಡಲು ತೀರ್ಮಾನಿಸಲಾಗಿತ್ತು. ಆದರೆ, ವಿಧಾನ ಪರಿಷತ್ ಮಂಗಳವಾರದವರೆಗೆ ನಡೆಸಲು ತೀರ್ಮಾನ ಕೈಗೊಳ್ಳಲಾಗಿತ್ತು. ಪ್ರತಿ ಸಲ ವಿಧಾನಸಭೆಯಲ್ಲಿ ಮಂಡನೆಯಾದ ವಿಧೇಯಕಗಳು ಪರಿಷತ್‌ನಲ್ಲಿ ಬಿದ್ದು ಹೋಗುತ್ತಿದ್ದವು. ಗುರುವಾರ ಅವಿಶ್ವಾಸ ನಿರ್ಣಯ ಮಂಡಿಸಲು ದಿನ ನಿಗದಿ ಮಾಡಬೇಕಿತ್ತು. ಆದರೆ, ಸಭಾಪತಿ ದಿಢೀರಾಗಿ ಕಲಾಪವನ್ನು ಮುಂದೂಡಿದ್ದಾರೆ. ಇದೊಂದು ಕೆಟ್ಟ ಸಂಪ್ರದಾಯ. ಕಾನೂನಿನಲ್ಲಿ ಇದಕ್ಕೆ ಅವಕಾಶ ಇಲ್ಲ ಎಂದರು.

ಸಭಾಪತಿಗೆ ಪತ್ರ ಬರೆದು ಮತ್ತೆ ಮಂಗಳವಾರದವರೆಗೆ ಕಲಾಪ ನಡೆಸಲು ವಿನಂತಿ ಮಾಡಲಾಗುವುದು. ನಮ್ಮ ಗಮನಕ್ಕೆ ಬಾರದೆ ಅವರು ನಿರ್ಧಾರ ಕೈಗೊಂಡಿದ್ದಾರೆ. ಸದನ ಏಕಾಏಕಿ ಅನಿರ್ದಿಷ್ಟಾವಧಿಗೆ ಮುಂದೂಡುವ ಅಧಿಕಾರ ಇಲ್ಲ. ಅವಿಶ್ವಾಸ ನಿರ್ಣಯ ಮಂಡನೆ ಮಾಡಿದ ತಕ್ಷಣ ಚರ್ಚೆಗೆ ಅವಕಾಶ ನೀಡಬೇಕು. ಅಧಿಕಾರ ಬರುತ್ತೆ, ಹೋಗುತ್ತೆ. ಆದರೆ, ಗೌರವ ಕಳೆದುಕೊಳ್ಳಬಾರದು ಎಂದರು.